ಎಂ.ವಿ.ಸಿ. 130/2023
ಆರ್ ಡಬ್ಲ್ಯು : 01

ದಿನಾಂಕ 20-08-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಎದುರುದಾರರ ಪರ ವಕೀಲರಿಂದಃ**

ನಾನು ಸಹಿ ಮಾಡಿರುವ ಮುಖ್ಯ ವಿಚಾರಣೆಯ ಪ್ರಮಾಣ ಪತ್ರ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಷಯಗಳು ಸರಿ ಇವೆ ಮತ್ತು ಇವು ನನ್ನ ಹೇಳಿಕೆಯ ಮೇರೆಗೆ ತಯಾರಿಸಲಾಗಿದೆ.

ನಾನು ಕೆಲವು ದಾಖಲಾತಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನೋಡಿ ಗುರುತಿಸುತ್ತೇನೆ. ಸದರಿ ದಾಖಲಾತಿಗಳನ್ನು ಈ ಕೆಳಕಂಡಂತೆ ನಿಶಾನೆಗೊಳಪಡಿಸಲಾಯಿತು.

| | |
|---|---|
| ನಿಆರ್ -1 | ಲೈಸೆನ್ಸ್ ನ ಪ್ರತಿ |
| ನಿಆರ್ -2 | ಎಲ್ ಎಲ್ ಆರ್ ನ ಯಥಾಪ್ರತಿ |
| ನಿಆರ್ -3 | ಫಾರಂ ನಂ 3 |
| ನಿಆರ್ -4 | ಕೇಶವರವರ ಲೈಸೆನ್ಸ್ ನ ಪ್ರತಿ |

ಆದ್ದರಿಂದ ಅರ್ಜಿಯನ್ನು ವಜಾ ಮಾಡಬೇಕಾಗಿ ಕೋರಿಕೆ.

**ಪಾಟೀ ಸವಾಲು - ಅರ್ಜಿದಾರರ ಪರ ವಕೀಲರಿಂದಃ**

ಅರ್ಜಿದಾರರು ಹಾಜುರಪಡಿಸಿರುವ ದಾಖಲೆಗಳನ್ನು ನೋಡಿ ತಿಳಿದುಕೊಂಡಿರುತ್ತೇನೆ . ಉಡುಪಿ ಟ್ರಾಫಿಕ್ ಪೊಲೀಸ್ ಠಾಣೆ ಯಲ್ಲಿ ನನ್ನ ವಿರುದ್ಧ ಅತೀ ವೇಗ ಮತ್ತು ಅಜಾಗುರುಕತೆಯಿಂದ ವಾಹನ ಚಲಾಯಿಸಿರುತ್ತೇನೆ ಎಂದು ಪ್ರಕರಣ ದಾಖಲಾಗಿದೆ ಎಂದರೆ ಸರಿ . ಪೊಲೀಸರು ನನ್ನ ವಿರುದ್ಧ ದೋಷಾರೋಪಣಾ

ಪತ್ರ ಸಲ್ಲಿಸಿರುತ್ತಾರೆ ಎಂದರೆ ಸರಿ . ಸಾಕ್ಷಿಗೆ 133 ನೋಟಿಸಿಗೆ ಉತ್ತರ ದ ದಾಖಲೆಯನ್ನು ತೋರಿಸಿ ಅದರಲ್ಲಿ ಇರುವ ಸಹಿ ನಿಮ್ಮ ತಂದೆಯವರದ್ದು ಅಲ್ಲವೇ ಎಂದು ಕೇಳಿದ ಪ್ರಶ್ನೆಗೆ ಸಾಕ್ಷಿ ಹೌದು ಎಂದು ಒಪ್ಪಿಕೊಂಡಿದ್ದರಿಂದ ಸದ್ರಿ ದಾಖಲೆಯನ್ನು ನಿಪಿ 25 ಎಂದು ಗುರುತಿಸಲಾಯಿತು. ನಾನು ಅರ್ಜಿದಾರರ ವಿರುದ್ದ ಉಡುಪಿ ಟ್ರಾಫಿಕ್ ಪೊಲೀಸ್ ಠಾಣೆ ಯಲ್ಲಿ ದೂರು ಕೊಟ್ಟಿಲ್ಲ . ಅಪಘಾತ ನನ್ನ ತಪ್ಪಿನಿಂದ ಆಗಿದ್ದರೂ ಕೂಡ ನನ್ನ ತಪ್ಪಿನಿಂದ ಅಪಘಾತವಾಗಿಲ್ಲ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ : ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸ.ಇದೆ ಎಂದು ಒಪ್ಪಿದರು

ಪ್ರ.ಹಿ.ಸಿ.ನ್ಯಾ ಮತ್ತು ಸಿ.ಜೆ.ಎಂ
ಉಡುಪಿ.